**JANUARY 31, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ವಿದ್ಯಾವಂತ ಯುವಕರಿಂದ** ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ಸಾಧ್ಯ– ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಮತ.

- **ಗ್ರಾಮ ಸ್ವರಾಜ್ಯ ಕಲ್ಪನೆಗೆ ಶಕ್ತಿ** ತುಂಬಿದ ಮಹಾತ್ಮಾ ಗಾಂಧೀಜಿಯವರ ಚಿಂತನೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಬಣ್ಣನೆ.

- **ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಅವರ 78 ನೇ ಪುಣ್ಯತಿಥಿ ಹಿನ್ನೆಲೆ, ರಾಜ್ಯದ ವಿವಿಧೆಡೆ ನಿನ್ನೆ ಹುತಾತ್ಮರ ದಿನ ಆಚರಣೆ.

- **ಧಾರವಾಡದ ಸಾಧನಕೇರಿ ಬೇಂದ್ರೆ ಭವನದಲ್ಲಿ ಇಂದು** ಅಂಬಿಕಾತನಯದತ್ತ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ.

**ಈಗ ವಾರ್ತೆಗಳ ವಿವರ**

*******

**ವಿದ್ಯಾವಂತ ಯುವಕರು** ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಸಾಧ್ಯವಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ದಾವಣಗೆರೆ ವಿಶ್ವವಿದ್ಯಾಲಯದ 13 ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಜ್ಞಾನ, ತಂತ್ರಜ್ಞಾನ, ವ್ಯವಹಾರ, ಕಲೆ ಅಥವಾ ಸಾಮಾಜಿಕ ಕ್ಷೇತ್ರ ಸೇರಿದಂತೆ ಯುವಜನತೆ ಆಯ್ಕೆ ಮಾಡುವ ಯಾವುದೇ ಕ್ಷೇತ್ರದಲ್ಲಿ ಶ್ರದ್ಧಾಪೂರ್ವಕ ಸೇವೆ ಮತ್ತು ನಿರಂತರ ಪ್ರಯತ್ನಗಳು ರಾಷ್ಟ್ರದ ಪ್ರಗತಿಗೆ ಕಾರಣವಾಗುತ್ತವೆ ಎಂದರು. ಶಿಕ್ಷಣವು ವ್ಯಕ್ತಿಯ ಜೀವನವನ್ನು ಹೊಸ ಆಲೋಚನೆಗಳು, ಜ್ಞಾನ ಮತ್ತು ಸಾಧ್ಯತೆಗಳಿಂದ ತುಂಬುವ ನಿರಂತರ ಪ್ರಯಾಣವಾಗಿದೆ. ನಿಮ್ಮ ಜ್ಞಾನ ಮತ್ತು ಪ್ರತಿಭೆಯನ್ನು ವೈಯಕ್ತಿಕ ಪ್ರಗತಿ, ಸಮಾಜ, ರಾಜ್ಯ, ಹಾಗೂ ಒಟ್ಟಾರೆ ದೇಶದ ಅಭಿವೃದ್ಧಿಗೆ ಉಪಯೋಗಿಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

*******

**ಮಹಾತ್ಮಾ ಗಾಂಧೀಜಿಯವರ** ಚಿಂತನೆ ಗ್ರಾಮಸ್ವರಾಜ್ಯದ ಕಲ್ಪನೆಗೆ ಶಕ್ತಿ ತುಂಬಿತು. ಗ್ರಾಮಗಳ ಪ್ರಗತಿಯಲ್ಲಿಯೇ ದೇಶದ ಪ್ರಗತಿ ಅಡಗಿದೆ ಎಂಬುದನ್ನು ಅವರು ಸ್ಪಷ್ಟವಾಗಿ ಪ್ರತಿಪಾದಿಸಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ ಹುತಾತ್ಮ ದಿನಾಚರಣೆ ಅಂಗವಾಗಿ ಮಹಾತ್ಮಾ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾತನಾಡಿದ ಅವರು, ಭಾರತ ಹಳ್ಳಿಗಳ ದೇಶವಾಗಿದ್ದು, ಗಾಂಧೀಜಿಯವರ ಕಾಲದಲ್ಲಿ ಶೇಕಡಾ 80 ರಷ್ಟು ಜನ ಹಳ್ಳಿಗಳಲ್ಲೇ ವಾಸಿಸುತ್ತಿದ್ದರು. ಗ್ರಾಮಗಳು ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಸ್ವಾವಲಂಬಿಯಾಗಬೇಕು ಎಂಬುದು

ಗಾಂಧೀಜಿಯವರ ಆಶಯವಾಗಿತ್ತು. ಗಾಂಧೀಜಿಯವರು ದೇಶಕ್ಕೆ ನೀಡಿದ ಅಮೂಲ್ಯ ಕೊಡುಗೆಯನ್ನು ಈ ದಿನ ಸ್ಮರಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

*******

**ಪ್ರತಿಭಾವಂತ ಕಾರ್ಮಿಕರಿಗೆ** ಗೌರವಾನ್ವಿತ ವೇತನ ನೀಡಬೇಕಾದ ಅಗತ್ಯವಿದೆ ಎಂದು ಕೌಶಲ್ಯಾಭಿವೃದ್ಧಿ, ಜೀವನೋಪಾಯ ಇಲಾಖೆ ಸಚಿವ ಡಾ. ಶರಣಪ್ರಕಾಶ ಪಾಟೀಲ ಹೇಳಿದ್ದಾರೆ. ಭಾರತೀಯ ಕೈಗಾರಿಕಾ ಒಕ್ಕೂಟ–ಸಿಐಐ ಬೆಂಗಳೂರಿನಲ್ಲಿ ಆಯೋಜಿಸಿದ್ದ ಎಂಎಸ್‌ಎಂಇ ಮತ್ತು ಉದ್ಯೋಗಾವಕಾಶ ಕುರಿತ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಕರ್ನಾಟಕದಲ್ಲಿ ಮಾತ್ರವಲ್ಲದೆ ದೇಶಾದ್ಯಂತ ಎಂಎಸ್‌ಎಂಇಗಳು ಅತಿದೊಡ್ಡ ಉದ್ಯೋಗ ಸೃಷ್ಟಿಕರ್ತರು. ಆದಾಗ್ಯೂ, ಕಡಿಮೆ ವೇತನದಿಂದ ಪ್ರತಿಭೆಯನ್ನು ಉಳಿಸಿಕೊಳ್ಳುವುದು ದೊಡ್ಡ ಸವಾಲಾಗಿದೆ ಎಂದರು. ಎಂಎಸ್‌ಎಂಇ ವಲಯದಲ್ಲಿ ವೇತನ ಕಡಿಮೆ ಇರುವ ಬಗ್ಗೆ ಮಾಹಿತಿ ಬಂದಿದೆ. ಬೆಂಗಳೂರಿನಂತಹ ನಗರದಲ್ಲಿ ಉದ್ಯೋಗಿಗಳು ಯೋಗ್ಯ ಜೀವನವನ್ನು ನಡೆಸಲು ಅನುವು ಮಾಡಿಕೊಡುವ ಗೌರವಾನ್ವಿತ ವೇತನವನ್ನು ಎಂಎಸ್‌ಎಂಇಗಳು ನೀಡಬೇಕು ಎಂದು ಸಚಿವರು ಹೇಳಿದರು.

*******

**ಬೆಂಗಳೂರು ಗ್ರಾಮಾಂತರ ಜಿಲ್ಲೆ** ದೇವನಹಳ್ಳಿ ಟೌನ್ ಕ್ರೀಡಾಂಗಣ ಅಭಿವೃದ್ಧಿಗೆ 13.5 ಕೋಟಿ ನಿಗದಿ ಮಾಡಲಾಗಿದೆ, ಜಿಲ್ಲಾ ಕ್ರೀಡಾಂಗಣಕ್ಕೆ 25 ಕೋಟಿ ರೂ ಅನುದಾನ ಮಂಜೂರಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಹೇಳಿದ್ದಾರೆ. ಪ್ರಸಕ್ತ ಸಾಲಿನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ಸರ್ಕಾರಿ ನೌಕರರು ದೈನಂದಿನ ವೃತ್ತಿಯ ಜೊತೆಗೆ ಕ್ರೀಡೆ, ವ್ಯಾಯಾಮಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ದೈಹಿಕ, ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಸಾಧ್ಯವಿದ ಎಂದರು. ಒತ್ತಡದ ಜೀವನ ನಿವಾರಣೆಗೆ ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಇದರಿಂದ ಕೆಲಸದ ಮೇಲಿನ ಆಸಕ್ತಿ ಹೆಚ್ಚಾಗಲಿದೆ ಎಂದು ಸಚಿವರು ಹೇಳಿದರು.

*******

**ರಾ ್ಟ್ರಪಿತ ಮಹಾತ್ಮ ಗಾಂಧೀಜಿ** ಅವರ 78 ನೇ ಪುಣ್ಯತಿಥಿಯನ್ನು ದೇಶಾದ್ಯಂತ್ಯ ಹುತಾತ್ಮರ ದಿನವನ್ನಾಗಿ ಆಚರಿಸಲಾಯಿತು. ಆ ಮೂಲಕ ಭಾರತದ ಸ್ವಾತಂತ್ರ್ಯ ಮತ್ತು ಏಕತೆಗಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಸ್ವಾತಂತ್ರ್ಯ ಹೋರಾಟಗಾರರು ಮತ್ತು ಹುತಾತ್ಮರಿಗೆ ನಿನ್ನೆ ಗೌರವ ಸಲ್ಲಿಸಲಾಯಿತು. **ಮಹಾತ್ಮ ಗಾಂಧಿ ಪುಣ್ಯಸ್ಮರಣೆಯ** ಪ್ರಯುಕ್ತ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹುತಾತ್ಮರ ದಿನಾಚರಣೆಯನ್ನು ವಿವಿಧೆಡೆ ಆಚರಿಸಲಾಯಿತು. ದೊಡ್ಡಬಳ್ಳಾಪುರದಲ್ಲಿ ವಿವಿಧ ಸಂಘಟನೆಗಳಿಂದ ಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗಾಂಧೀಜಿ ಅವರ ಅಹಿಂಸಾ ತತ್ವ ತ್ಯಾಗ ಹಾಗೂ ಹೋರಾಟಗಳನ್ನು ಸ್ಮರಿಸಲಾಯಿತು. ದೊಡ್ಡಬಳ್ಳಾಪುರ ನ್ಯಾಯಾಲಯದ ಆವರಣದಲ್ಲಿ ನಗರಸಭೆಯ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. **ಮಡಿಕೇರಿಯಲ್ಲಿ** ಕೊಡಗು ಜಿಲ್ಲಾಡಳಿತ ಹಾಗೂ ಸರ್ವೋದಯ ಸಮಿತಿ ವತಿಯಿಂದ ರಾ ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮವನ್ನು ಪೊಲೀಸ್ ಗೌರವ

ರಕ್ಷೆಯೊಂದಿಗೆ, ಜಿಲ್ಲಾ ಖಜಾನೆ ಕಚೇರಿಯಿಂದ ಮೆರವಣಿಗೆಯಲ್ಲಿ ಗಾಂಧಿ ಮೈದಾನಕ್ಕೆ ಕೊಂಡೊಯ್ಯಲಾಯಿತು. **ಕೊಪ್ಪಳ ಜಿಲ್ಲಾಡಳಿತ** ವತಿಯಿಂದ ನಡೆದ ಹುತಾತ್ಮರ ದಿನ ಕಾರ್ಯಕ್ರಮದಲ್ಲಿ ರಾ ್ಟ್ರಪಿತ ಮಹಾತ್ಮ ಗಾಂಧಿಜೀ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಸುರೇಶ ಇಟ್ನಾಳ ಮತ್ತು ಇತರ ಗಣ್ಯರು ಪುಷ್ಪನಮನ ಸಲ್ಲಿಸಿದರು. ರಾಜ್ಯದ ವಿವಿಧೆಡೆ ಹುತಾತ್ಮರ ದಿನವನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸಿದ ಕುರಿತು ವರದಿಗಳು ಬಂದಿವೆ.

***********

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**

**ಪ್ರಕಟಣೆ–42 ಸೆಕೆಂಡ್ಸ್**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

***********

**ಧಾರವಾಡದ ಡಾ.ದ.ರಾ.ಬೇಂದ್ರೆ** ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಕೊಡಮಾಡುವ ಅಂಬಿಕಾತನಯದತ್ತ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ ಇಂದು ಸಂಜೆ 5 ಗಂಟೆಗೆ ಸಾಧನಕೇರಿಯ ಬೇಂದ್ರೆ ಭವನದಲ್ಲಿ ನಡೆಯಲಿದೆ. ಹಿರಿಯ ಸಾಹಿತಿ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದು, ಟ್ರಸ್ಟ್ ಅಧ್ಯಕ್ಷ ಡಾ. ಸರಜೂ ಕಾಟ್ಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಲೇಖಕಿ ಧಾರವಾಡದ ಪ್ರೊ.ಮಾಲತಿ ಪಟ್ಟಣಶೆಟ್ಟಿ ಮತ್ತು ಹಾವೇರಿಯ ಸಾಹಿತಿ ಸತೀಶ ಕುಲಕರ್ಣಿ ಈ ಬಾರಿಯ ಪ್ರಶಸ್ತಿಗೆ ಭಾಜನರಾಗಿದ್ದು, ಪ್ರಶಸ್ತಿ ಕುರಿತು ಸತೀಶ ಕುಲಕರ್ಣಿ ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ–ಸತೀಶ ಕುಲಕರ್ಣಿ– 42 ಸೆಕೆಂಡ್ಸ್**

***********

**ವಿಶೇಷಚೇತನರಿಗೆ ಸರ್ಕಾರದಿಂದ** ಸಿಗುವ ಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಲು ಸಂಬಂಧಿಸಿದ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಅಧಿಕಾರಿಗಳಿಗೆ ಸೂಚಿಸಿದ್ದಾರೆ.ವಿಶೇಷಚೇತನ ವ್ಯಕ್ತಿಗಳ ಹಕ್ಕುಗಳ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ಇಲಾಖೆಗಳ ಹಾಗೂ ಸ್ಥಳೀಯ ಸಂಸ್ಥೆಗಳ ಶೇಕಡ 5 ರ ್ಟ ಅನುದಾನವನ್ನು ವಿಶೇಷಚೇತನರ ಕಲ್ಯಾಣಕ್ಕಾಗಿ ಬಳಕೆ ಮಾಡಿದ ಬಗ್ಗೆ ಪ್ರತಿ ತಿಂಗಳು 5 ನೇ ತಾರೀಖಿನೊಳಗೆ ಮಾಹಿತಿ ನೀಡಬೇಕು ಎಂದರು. ಸರ್ಕಾರಿ ಕಛೇರಿಗಳಲ್ಲಿ ವಿಶೇಷಚೇತನರಿಗೆ ಸುಗಮವಾಗಿ ಸಂಚರಿಸಲು ರ್‍ಯಾಂಪಗಳು ಶೌಚಾಲಯ, ಹಾಗೂ ಸಾರ್ವಜನಿಕ ಸಾರಿಗೆ ಬಸ್ಸುಗಳಲ್ಲಿ ಹತ್ತಲು, ಇಳಿಯಲು ಅನುಕೂಲಕರ ವ್ಯವಸ್ಥೆ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

***********

**ಕೇಂದ್ರ ಸರ್ಕಾರದ ಬೆಂಬಲ ಬೆಲೆ** ಯೋಜನೆಯಡಿ, ಪ್ರಸಕ್ತ ಸಾಲಿನಲ್ಲಿ ಎಫ್.ಎ.ಕ್ಯೂ. ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಧಾರವಾಡ ಜಿಲ್ಲೆಯ ರೈತರಿಂದ ಮಾತ್ರ ಖರೀದಿಸಲು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾ ಟಾಸ್ಕ್‌ಫೋರ್ಸ್

ಸಮಿತಿಯ ಅಧ್ಯಕ್ಷರೂ ಆಗಿರುವ ಪ್ರಭಾರ ಜಿಲ್ಲಾಧಿಕಾರಿ ಭುವನೇಶ ಪಾಟೀಲ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರು ಅವರು, ಪ್ರತಿ ಕ್ವಿಂಟಾಲ್‌ಗೆ 5,875 ರೂಪಾಯಿಗಳಂತೆ ಕಡಲೆ ಕಾಳು ಖರೀದಿಸಲಾಗುವುದು. ಇದೇ 29 ರಿಂದ ಏಪ್ರಿಲ್ 18 ರವರೆಗೆ ನೋಂದಣಿ ಮಾಡಿಕೊಳ್ಳಲು ಅವಕಾಶವಿದ್ದು, ಉತ್ಪನ್ನ ಖರೀದಿಸಲು ಇದೇ 29, ರಿಂದ ಏಪ್ರಿಲ್ 28 ರವರೆಗೆ ಅವಧಿ ನಿಗದಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

***********

**ಜಿಲ್ಲಾ ಪಂಚಾಯತ್ ಹಾಗೂ** ಕೈಮಗ್ಗ ಮತ್ತು ಜವಳಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಕೋಲಾರ ನಗರದ ಶತಶೃಂಗ ಪೊಲೀಸ್ ಸಮುದಾಯ ಭವನದಲ್ಲಿ ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಕೈಮಗ್ಗ ಮೇಳ 'ವಸ್ತ್ರಸಿರಿ–2026' ಆಯೋಜಿಸಲಾಗಿತ್ತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಪ್ರವೀಣ್ ಬಾಗೇವಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಫೆಬ್ರವರಿ 03 ರವರೆಗೆ ಐದು ದಿನಗಳ ಕಾಲ ಮೇಳ ನಡೆಯಲಿದ್ದು, ರಾಜ್ಯದ ವಿವಿಧ ಜಿಲ್ಲೆಗಳ ಸುಮಾರು 25 ಕೈಮಗ್ಗ ನೇಕಾರ ಸಹಕಾರ ಸಂಘಗಳು ಈ ಮೇಳದಲ್ಲಿ ಭಾಗವಹಿಸಿವೆ. ಗ್ರಾಹಕರಿಗೆ ಎಲ್ಲಾ ಕೈಮಗ್ಗ ಉತ್ಪನ್ನಗಳ ಮೇಲೆ ಶೇಕಡ 20 ರಷ್ಟು ವಿಶೇಷ ರಿಯಾಯಿತಿ ನೀಡಲಾಗುತ್ತಿದೆ ಎಂದರು.

***********

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ವಿದ್ಯಾವಂತ ಯುವಕರಿಂದ** ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ಸಾಧ್ಯ– ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಮತ.

**ಗ್ರಾಮ ಸ್ವರಾಜ್ಯ ಕಲ್ಪನೆಗೆ ಶಕ್ತಿ** ತುಂಬಿದ ಮಹಾತ್ಮಾ ಗಾಂಧೀಜಿಯವರ ಚಿಂತನೆ: ಸಿದ್ದರಾಮಯ್ಯ ಬಣ್ಣನೆ.

**ರಾಷ್ಟ್ರಪಿತ ಮಹಾತ್ಮ ಗಾಂಧೀಜಿ** ಅವರ 78 ನೇ ಪುಣ್ಯತಿಥಿ ಹಿನ್ನೆಲೆ, ರಾಜ್ಯದ ವಿವಿಧೆಡೆ ನಿನ್ನೆ ಹುತಾತ್ಮರ ದಿನ ಆಚರಣೆ.

**ಧಾರವಾಡದ ಸಾಧನಕೇರಿ ಬೇಂದ್ರೆ ಭವನದಲ್ಲಿ ಇಂದು** ಅಂಬಿಕಾತನಯದತ್ತ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**